ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಭರವಸೆಗಳ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ

ದಿನಾಂಕ : DATE : 15/06/2019

# ಅಧಿಕಾರಿಗಳ ವರ್ತನೆಗೆ ರಾಮಸ್ವಾಮಿ ಕಿಡಿ

## ಬಿ.ಎಂ.ಕಾವಲ್ ಅಕ್ರಮ: ಭರವಸೆ ಸಮಿತಿಯಿಂದ ಪರಿಶೀಲನೆ

ಪ್ರಜಾವಾಣಿ ವಾರ್ತೆ 15-6-19

ಬೆಂಗಳೂರು: ಕೆಂಗೇರಿ ಹೋಬಳಿಯ ಬಿ.ಎಂ.ಕಾವಲ್‌ನಲ್ಲಿ ಸರ್ವೇ ನಂಬರ್ 137ರಲ್ಲಿ ಆಗಿರುವ ಅಕ್ರಮಗಳ ಕುರಿತಂತೆ ಸರ್ಕಾರದ ಭರವಸೆ ಸಮಿತಿ ಶುಕ್ರವಾರ ಪರಿಶೀಲನೆ ನಡೆಸಿತು.

ಇಲ್ಲಿನ ಅಕ್ರಮಗಳ ಬಗ್ಗೆ ವಿಧಾನಸಭಾ ಅಧ್ಯಕ್ಷರಿಗೆ ವರದಿ ಸಲ್ಲಿಸಲಾಗುವುದು ಎಂದು ಸಮಿತಿಯ ಅಧ್ಯಕ್ಷ ಎ.ಟಿ.ರಾಮಸ್ವಾಮಿ ಬಳಿಕ ಪತ್ರಕರ್ತರಿಗೆ ತಿಳಿಸಿದರು.

ಇಲ್ಲಿರುವ 310 ಎಕರೆ ಸರ್ಕಾರಿ ಭೂಮಿಯನ್ನು ನಕಲಿ ದಾಖಲೆಗಳನ್ನು ಬಳಸಿ ಖಾಸಗಿ ವ್ಯಕ್ತಿಗಳಿಗೆ ಹಸ್ತಾಂತರ ಮಾಡಿದ್ದು ದೊಡ್ಡ ಹಗರಣವಾಗಿತ್ತು. ಕಳೆದ ಡಿಸೆಂಬರ್‌ನಲ್ಲಿ ಈ ಹಸ್ತಾಂತರ ಪ್ರಕ್ರಿಯೆಯನ್ನು ರಾಜ್ಯ ಹೈಕೋರ್ಟ್ ತಡೆಹಿಡಿದಿತ್ತು.

ಇಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ಕಂದಾಯ ಸಚಿವರು ಮತ್ತು ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರಿಗೆ ಮಾಹಿತಿ ನೀಡಲಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ವೇಳೆ ಸರ್ಕಾರಕ್ಕೆ ಸೇರಿದ ಇಲ್ಲಿನ ಜಮೀನು ಕೃಷಿ ಜಮೀನು ಎಂಬುದಾಗಿ ಗುರುತಿಸಿಕೊಂಡಿರುವುದು ಹಾಗೂ ಖಾಸಗಿ ವ್ಯಕ್ತಿಗಳು ಇದನ್ನು ಸ್ವಾಧೀನ ಮಾಡಿಕೊಂಡಿರುವುದು ಗೊತ್ತಾಯಿತು. ಈ ಜಮೀನಿನಲ್ಲಿ ಬೇಸಾಯ ಮಾಡದೆ ಇರುವುದು ಸಹ ಗಮನಕ್ಕೆ ಬಂತು.



ಬೆಂಗಳೂರು ಕೆಂಗೇರಿಯ ಬಿ.ಎಂ.ಕಾವಲ್‌ನಲ್ಲಿ ಆಗಿರುವ ಅಕ್ರಮಗಳ ಬಗ್ಗೆ ಸರ್ಕಾರದ ಭರವಸೆ ಸಮಿತಿಯಿಂದ ಶುಕ್ರವಾರ ಪರಿಶೀಲನೆ ನಡೆಯಿತು

ಈ ಭೇಟಿಗೆ ಮೊದಲಾಗಿ ವಿಧಾನ ಸೌಧದಲ್ಲಿ ಶುಕ್ರವಾರ ಭರವಸೆ ಸಮಿತಿಯ ಸಭೆ ನಡೆಯಿತು. ಸರ್ಕಾರಿ ಭೂಮಿಯನ್ನು ಈ ರೀತಿ ಖಾಸಗಿಯವರಿಗೆ ಪರಭಾರೆ ಮಾಡಿದ ಕೃತ್ಯವನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡ ರಾಮಸ್ವಾಮಿ ಅವರು, ಅಧಿಕಾರಿಗಳ ಬೇಜವಾಬ್ದಾರಿಗೆ ಕೆಂಡಾಮಂಡಲವಾದರು ಎಂದು ಮೂಲಗಳು ತಿಳಿಸಿವೆ.

ಇಲ್ಲಿನ ಜಮೀನಿನ ಒಡೆತನದ ಬಗ್ಗೆ ಇಬ್ಬರು ಮಹಿಳೆಯರು ಮಾಡಿದ ಮನವಿಯನ್ನು ಬೆಂಗಳೂರು ನಗರ ಜಿಲ್ಲೆಯ 2ನೇ ವಿಶೇಷ ಜಿಲ್ಲಾಧಿಕಾರಿ ಪುರಸ್ಕರಿಸಿದ್ದರು. ಈ ವಿಷಯ ವಿಧಾನ-ಸಭೆಯಲ್ಲಿ ಚರ್ಚೆಗೆ ಬಂದಿತ್ತು ಹಾಗೂ ಪರಿಶೀಲನೆಗಾಗಿ ಭರವಸೆ ಸಮಿತಿಗೆ ಹಸ್ತಾಂತರಿಸಲಾಗಿತ್ತು.

ಇಲ್ಲಿನ ಜಮೀನಿನ ಒಡೆತನದ ವಿವಾದಕ್ಕೆ ಎರಡು ದಶಕಗಳ ಇತಿಹಾಸ ಇದೆ. ಈ ಜಮೀನು ಖಾಸಗಿ ವ್ಯಕ್ತಿಗಳ ಸ್ವಾಧೀನದಲ್ಲಿದೆ ಎಂದು 2001ರಲ್ಲಿ ವಿಶೇಷ ತಹಶೀಲ್ದಾರ್ ಒಬ್ಬರು ವರದಿ ಸಲ್ಲಿಸಿದ ಬಳಿಕ ಜಮೀನಿನ ವಿವಾದ ತಾರಕಕ್ಕೇರಿದೆ.

### ಅಧ್ಯಕ್ಷ ಸ್ಥಾನಕ್ಕೆ ಎ.ಟಿ.ರಾಮಸ್ವಾಮಿ ರಾಜೀನಾಮೆ

ಕೆಂಗೇರಿಯ ಬಿ.ಎಂ.ಕಾವಲ್‌ನ ಸರ್ಕಾರಿ ಜಮೀನು ಒತ್ತುವರಿ ಪ್ರದೇಶಕ್ಕೆ ಶುಕ್ರವಾರ ಭೇಟಿ ನೀಡಿ ಬಂದ ಬಳಿಕ ಸರ್ಕಾರದ ಭರವಸೆ ಸಮಿತಿಯ ಅಧ್ಯಕ್ಷ ಎ.ಟಿ.ರಾಮಸ್ವಾಮಿ ರಾಜೀನಾಮೆ ಸಲ್ಲಿಸಿದರು.

'ಒತ್ತುವರಿಯಾಗಿದ್ದ ಸರ್ಕಾರಿ ಜಮೀನನ್ನು ಮರಳಿ ಪಡೆಯುವುದಾಗಿ ವಿಧಾನಸಭೆಯಲ್ಲಿ ಸ್ಪೀಕರ್ ಮೂಲಕ ಸರ್ಕಾರ ಭರವಸೆ ನೀಡಿತ್ತು. ಆದರೆ ಈವರೆಗೂ ಒತ್ತುವರಿ ಜಮೀನನ್ನು ಮರಳಿ ಪಡೆದಿಲ್ಲ. ಇದರಿಂದ ಬೇಸರವಾಗಿದೆ. ಬಡವರಿಗೆ ನ್ಯಾಯ ಸಿಗುತ್ತಿಲ್ಲ ಎಂದಾದ ಮೇಲೆ ಅಧ್ಯಕ್ಷ ಸ್ಥಾನದಲ್ಲಿ ಮುಂದುವರಿಯುವುದು ಅರ್ಥಹೀನ' ಎಂದು ಅವರು ತಮ್ಮ ರಾಜೀನಾಮೆಗೆ ಕಾರಣ ನೀಡಿದ್ದಾರೆ. ಇವರು ಅರಕಲಗೂಡು ಕ್ಷೇತ್ರದ ಜೆಡಿಎಸ್ ಶಾಸಕರಾಗಿದ್ದಾರೆ.